**ವಿಷಯ:** ಶ್ರೀಮತಿ ಸಿ.ಸುಮಾ, ಸಹಾಯಕ ಕೃಷಿ ನಿರ್ದೇಶಕರು(ವಿ.ತ), ಜಂಟಿ ಕೃಷಿ ನಿದೇಶಕರ ಕಛೇರಿ, ಮೈಸೂರು, ಇವರ ಅನಧಿಕೃತ ಗೈರು ಹಾಜರಿ ಬಗ್ಗೆ ಶಿಸ್ತುಕ್ರಮ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಕೃತೋಇ 223 ಕೃಪಸೇ 2009, ದಿನಾಂಕ:10-09-2009.
2. ಕೃಷಿ ಆಯುಕ್ತರ ಕಛೇರಿಯ ಪತ್ರ ಸಂಖ್ಯೆ:ಸಿಬ್ಬಂದಿ-1/ವಿಚಾರಣೆ-4/15/ಮೈ/2012-13 ದಿನಾಂಕ: 28-03-2013.
3. ಸರ್ಕಾರದ ಕಾರಣ ಕೇಳುವ ಪತ್ರ ಸಂಖ್ಯೆ: ಕೃಇ 116 ಕೃಪಸೇ 2011, ದಿನಾಂಕ: 19-07-2013.

*********

**ಪ್ರಸ್ತಾವನೆ:**

ಶ್ರೀಮತಿ ಸಿ.ಸುಮಾ, ಸಹಾಯಕ ಕೃಷಿ ನಿರ್ದೇಶಕರು(ವಿ.ತ), ಜಂಟಿ ಕೃಷಿ ನಿದೇಶಕರ ಕಛೇರಿ, ಮೈಸೂರು, ಇವರು, ತಮ್ಮ ಪತಿ ಬಾಲಾಜಿಸಿಂಗ್‌ರವರು ಇಂಗ್ಲೆಂಡಿನ ಬ್ರಿಸ್ಟೆಲ್ ನಗರದಲ್ಲಿ ಸೇವೆಯಲ್ಲಿರುವುದರಿಂದ ತಮ್ಮ ಪತಿಯ ಜೊತೆಗೆ ಇರಲು ದಿನಾಂಕ:01-07-2009 ರಿಂದ 30-04-2011 ರವರೆಗೆ ವೇತನ ರಹಿತ ರಜೆಯ ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮಂಜೂರು ಮಾಡಲಾಗಿದೆ. ಶ್ರೀಮತಿ ಸಿ.ಸುಮಾ, ಸಹಾಯಕ ಕೃಷಿ ನಿರ್ದೇಶಕರು(ವಿ.ತ), ಜಂಟಿ ಕೃಷಿ ನಿದೇಶಕರ ಕಛೇರಿ, ಮೈಸೂರು, ಇವರು, ವೇತನ ರಹಿತ ರಜೆ ಪಡೆದು ಇಂದಿನವರೆಗೂ ಮರಳಿ ಕರ್ತವ್ಯಕ್ಕೆ ಹಾಜರಾಗದಿರುವುದರಿಂದ ಇವರ ವಿರುದ್ದ ಶಿಸ್ತುಕ್ತಮ ಕೈಗೊಳ್ಳಲು ಕರ್ನಾಟಕ ನಾಗರಿಕ ಸೇವಾ(ಸಿ.ಸಿ.ಎ.) ನಿಯಮಾವಳಿ 1957ರ ನಿಯಮ 11ರಡಿ ದೋಷಾರೋಪಣಾ ಪಟ್ಟಿಯನ್ನು ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಪತ್ರದಲ್ಲಿ ಕೃಷಿ ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಶ್ರೀಮತಿ ಸಿ.ಸುಮಾ, ಸಹಾಯಕ ಕೃಷಿ ನಿರ್ದೇಶಕರು(ವಿ.ತ), ಜಂಟಿ ಕೃಷಿ ನಿದೇಶಕರ ಕಛೇರಿ, ಮೈಸೂರು, ಇವರಿಗೆ ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಪತ್ರದಲ್ಲಿ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಜಾರಿ ಮಾಡಲಾಗಿತ್ತು. ಮತ್ತು ದಿನಾಂಕ:14-02-2014ರ ಡೆಕ್ಕನ್ ಹೆರಾಲ್ಡ್ ಆಂಗ್ಲ ದಿನಪತ್ರಿಕೆಯಲ್ಲಿ ಪ್ರಕಟಣೆ ನೀಡಲಾಗಿದೆ. ಸದರಿ ಅಧಿಕಾರಿಯವರು ಇಲ್ಲಿಯವರೆಗೂ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸದಿರುವುದರಿಂದ, ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ, ಶ್ರೀ ಕೆ.ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಶ್ರೀ ಮಧುಸೂದನ ಮೂರ್ತಿ, ಆಡಳಿತಾಧಿಕಾರಿ, ಕೃಷಿ

-2-

ಆಯುಕ್ತಾಲಯ, ಬೆಂಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 116 ಕೃಪಸೇ 2011.**
**ಬೆಂಗಳೂರು. ದಿನಾಂಕ: 24-04-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀಮತಿ ಸಿ.ಸುಮಾ, ಸಹಾಯಕ ಕೃಷಿ ನಿರ್ದೇಶಕರು(ವಿ.ತ), ಜಂಟಿ ಕೃಷಿ ನಿದೇಶಕರ ಕಛೇರಿ, ಮೈಸೂರು, ಇವರ ವಿರುದ್ದದ ಕರ್ತವ್ಯಕ್ಕೆ ಅನಧಿಕೃತ ಗೈರು ಹಾಜರಿಯ ಆರೋಪದ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 2ರಲ್ಲಿ ಪ್ರದತ್ತವಾಗಿರುವ ಅಧಿಕಾರ ಚಲಾಯಿಸಿ ಶ್ರೀ ಕೆ.ರಾಧಾಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ. ಹಾಗೂ ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 5(ಸಿ)ಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಸ್ತು ಪ್ರಾಧಿಕಾರಿಯ ಪರವಾಗಿ ವಿಷಯ ಮಂಡಿಸಲು ಶ್ರೀ ಮಧುಸೂದನ ಮೂರ್ತಿ, ಆಡಳಿತಾಧಿಕಾರಿ, ಕೃಷಿ ಆಯುಕ್ತಾಲಯ, ಬೆಂಗಳೂರು, ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ), ಹೊಸಕಟ್ಟಡ, ಬೆಂಗಳೂರು.
2. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3. ಜಂಟಿ ಕೃಷಿ ನಿರ್ದೇಶಕರು, ಮೈಸೂರು/ಕಾರವಾರ.
4. ಶ್ರೀ ಕೆ. ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ:180, ಲಿಂಕ್ ರೋಡ್, ಮಲ್ಲೇಶ್ವರಂ, ಬೆಂಗಳೂರು-560 003.
5. ಶ್ರೀ ಮಧುಸೂದನ ಮೂರ್ತಿ, ಆಡಳಿತಾಧಿಕಾರಿ, ಕೃಷಿ ಆಯುಕ್ತಾಲಯ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ-1 ಕೃಷಿ ಇಲಾಖೆ.
8. ಸಂಬಂಧಿಸಿದ ಅಧಿಕಾರಿಗಳಿಗೆ (ಆಯುಕ್ತರು, ಕೃಷಿ ಇಲಾಖೆ ಇವರ ಮುಖಾಂತರ).
9. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.